

**ಸುರತ್ಕಲ್:** ಇಲ್ಲಿನ ಎನ್‌ಐಟಿಕೆ ಸಂಸ್ಥೆಯಲ್ಲಿ ವಿಶ್ವ ಪರಿಸರ ದಿನದ ಪ್ರಯುಕ್ತ ಹಾಸ್ಟೆಲ್ ಬ್ಲಾಕ್ 5ರ ಬಳಿ 700 ಸಸಿ ನೆಡುವ ಅಭಿಯಾನಕ್ಕೆ ಚಾಲನೆ ನೀಡಲಾಯಿತು. ಕರ್ನಾಟಕ ರಾಜ್ಯ ಅರಣ್ಯ ಇಲಾಖೆ,ಪರಿಸರ ಇಲಾಖೆ ಸಹಯೋಗದಲ್ಲಿ ಏಕ್ ಪೇಡ್ ಮಾ ಕೆ ನಾಮ್ ಆಂದೋಲನವನ್ನು ದೇಶದ ಸರಕಾರ ಪ್ರಾರಂಭಿಸಿದ್ದು, ಈ ಕಾರ್ಯಕ್ರಮದಲ್ಲಿ ಎನ್‌ಐಟಿಕೆ ಸಂಸ್ಥೆಯ ನಿರ್ದೇಶಕ ಪ್ರೊ। ಬಿ. ರವಿ, ಉಪನಿರ್ದೇಶಕ ಪ್ರೊ। ಸುಭಾಶ್ ಸಿ. ಯರಗಲ್, ಪ್ರೊಫೆಸರ್‌ಗಳು, ವಿದ್ಯಾರ್ಥಿಗಳು, ಸಿಬಂದಿ ಅರಣ್ಯ ಇಲಾಖೆ, ಪರಿಸರ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

Udayavani, Date: 05/06/25 p, no - 02